# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 184 (179)
2. ಸದಸ್ಯರ ಹೆಸರು : ಶ್ರೀ ಸಿ.ಎಂ. ಲಿಂಗಪ್ಪ (ನಾಮ ನಿರ್ದೇಶನ ಹೊಂದಿದವರು)
3. ಉತ್ತರಿಸುವ ದಿನಾಂಕ : 22.09.2020
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | 2020-21ನೇ ಸಾಲಿನ ಆಯವ್ಯಯದಲ್ಲಿ ಘೋಷಣೆ ಮಾಡಿದಂತೆ ರಾಮನಗರ ತಾಲ್ಲೂಕಿನ ಹಾರೋಹಳ್ಳಿ 5ನೇ ಹಂತದ ಕರ್ನಾಟಕ ಕೈಗಾರಿಕ ಪ್ರದೇಶಾಭಿವೃದ್ಧಿ ಮಂಡಳಿ (KIADB) ಕೈಗಾರಿಕಾ ಪ್ರದೇಶದಲ್ಲಿ "ಎಲೆಕ್ಟ್ರಿಕ್ ವೆಹಿಕಲ್ಸ್ ಮತ್ತು ಎನರ್ಜಿ ಸ್ಟೋರೇಜ್ ಮ್ಯಾನುಫ್ಯಾಕ್ಚರಿಂಗ್ ಕ್ಲಸ್ಟರ್"ನ್ನು ಸ್ಥಾಪಿಸಲಾಗಿದೆಯೇ; | 2020-21ನೇ ಸಾಲಿನ ಆಯವ್ಯಯ ಭಾಷಣದಲ್ಲಿ ಘೋಷಿಸಿದಂತೆ, ಬಿಡದಿ ಇಂಟಿಗ್ರೇಟೆಡ್ ಟೌನ್.ಷಿಪ್ ಯೋಜನೆಗಾಗಿ ಗುರುತಿಸಲಾಗಿದ್ದ 9600 ಎಕರೆ ಜಮೀನಿನ ಪೈಕಿ, ಎಲೆಕ್ಟ್ರಿಕ್ ವೆಹಿಕಲ್ ಮತ್ತು ಎನರ್ಜಿ ಸ್ಟೋರೇಜ್ ಮ್ಯಾನುಫ್ಯಾಕ್ಚರಿಂಗ್ ಕ್ಲಸ್ಟರ್ ಯೋಜನೆಗಾಗಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯು ರಾಮನಗರ ಜಿಲ್ಲೆ, ಕನಕಪುರ ತಾಲ್ಲೂಕು, ಹಾರೋಹಳ್ಳಿ ಮತ್ತು ಬಿಡದಿ ಕೈಗಾರಿಕಾ ಪ್ರದೇಶಗಳ ಮಧ್ಯಭಾಗದಲ್ಲಿ ಬರುವ ಕಂಚುಗಾರನಹಳ್ಳಿ ಮತ್ತು ಇತರೆ ಗ್ರಾಮಗಳ ಒಟ್ಟು 912-12½ ಎಕರೆ ಜಮೀನನ್ನು ಹಾರೋಹಳ್ಳಿ 5ನೇ ಹಂತಕ್ಕಾಗಿ ಭೂಸ್ವಾಧೀನಪಡಿಸಲು ಕೆ.ಐ.ಎ.ಡಿ. ಕಾಯ್ದೆ ಕಲಂ 28(4)ರ ಅಂತಿಮ ಅಧಿಸೂಚನೆಯನ್ನು ದಿನಾಂಕ: 09.07.2020ರಂದು ಹೊರಡಿಸಲಾಗಿದೆ.<br><br>ಈ ಜಮೀನುಗಳಿಗೆ ಭೂದರ ನಿಗದಿಪಡಿಸುವ ಸಲುವಾಗಿ ಜಿಲ್ಲಾಧಿಕಾರಿ, ರಾಮನಗರ ಜಿಲ್ಲೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ: 12.08.2020 ಮತ್ತು 13.08.2020ರಂದು ಕರೆದ ಭೂದರ ನಿರ್ಧರಣಾ ಸಲಹಾ ಸಮಿತಿ ಸಭೆಯಲ್ಲಿ ಕೆಲವು ಭೂಮಾಲೀಕರು |

| | | |
|---|---|---|
| ಆ. | ಸ್ಥಾಪಿಸದೇ ಇದ್ದಲ್ಲಿ, ಸ್ಥಾಪಿಸಲಾಗುವುದು ಯಾವಾಗ; ವಿಳಂಬಕ್ಕೆ ಕಾರಣಗಳೇನು? | ಆಕ್ಷೇಪಣೆ ವ್ಯಕ್ತಪಡಿಸಿದ ಕಾರಣ, ಅಂತಿಮ ನಿರ್ಣಯಕ್ಕೆ ಬರಲು ಸಾಧ್ಯವಾಗಿರುವುದಿಲ್ಲ.<br>ಸದರಿ ಜಮೀನಿಗೆ ಒಪ್ಪಂದದ ಪರಿಹಾರ ದರ ನಿಗದಿಪಡಿಸಿ, ಭೂಪರಿಹಾರ ಪ್ರಕ್ರಿಯೆ ಪೂರ್ಣಗೊಂಡ ನಂತರ ಉದ್ದೇಶಿತ ಯೋಜನೆಯನ್ನು ಜಾರಿಗೆ ತರಲಾಗುವುದು. |

ಸಂಖ್ಯೆ: ಸಿಐ 153 ಐಎಪಿ (ಇ) 2020

(ಜಗದೀಶ ಶೆಟ್ಟರ)

ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು